ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 18/3/2021

## ಸಂಪುಟ ಸಭೆಯಲ್ಲಿ ನಿರ್ಧಾರ | ಕಲ್ಯಾಣ ಕರ್ನಾಟಕದಲ್ಲಿ ವೈದ್ಯರ ನೇಮಕಕ್ಕೆ ವಿಶೇಷ ಕಾನೂನು

# ಪಿಎಚ್‌ಸಿಗಳಿಗೆ ಟೆಲಿಮೆಡಿಸನ್ ಭಾಗ್ಯ, ಕೈದಿಗಳಿಗೆ ಕೈತುಂಬ ಕೆಲಸ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕರೊನಾದ ಅನಿವಾರ್ಯ ಸಂದರ್ಭದಲ್ಲಿ ಬಳಕೆಯಾದ ಟೆಲಿಮೆಡಿಸನ್ ಸೇವೆಯನ್ನು ಗ್ರಾಮೀಣ ಭಾಗದ ಆರೋಗ್ಯ ಕೇಂದ್ರಗಳಿಗೆ ಶಾಶ್ವತವಾಗಿ ಲಭ್ಯವಾಗಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಮಹತ್ವದ ನಿರ್ಧಾರ ಮಾಡಿದೆ.

ಬುಧವಾರ ನಡೆದ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆ ಮಾಡಿದ್ದು, ರಾಜ್ಯದ 1,120 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು 2032 ಆರೋಗ್ಯ ಮತ್ತು ಕಲ್ಯಾಣ ಕೇಂದ್ರಗಳಲ್ಲಿ ನ್ಯಾಷನಲ್ ಆರೋಗ್ಯ ಮಿಷನ್‌ನಡಿ ಟೆಲಿ ಮೆಡಿಸನ್ ಅಳವಡಿಕೆಗೆ 18.96 ಕೋಟಿ ರೂ. ಬಳಕೆ ಮಾಡಿಕೊಳ್ಳುವ ಪ್ರಸ್ತಾವನೆ ಕುರಿತು ನಿರ್ಣಯಿಸಿದೆ.

ತಳಹಂತದ ಆರೋಗ್ಯ ಕೇಂದ್ರಗಳಲ್ಲಿ ಪರಿಣಾಮಕಾರಿಯಾಗಿ ಟೆಲಿಮೆಡಿಸಿನ್ ಸೌಲಭ್ಯ ಬಳಸಿಕೊಳ್ಳಲು ವಿವಿಧ ಪರಿಕರ ಖರೀದಿಗೆಆಡಳಿತಾತ್ಮಕಅನುಮೋದನೆ ಪಡೆದುಕೊಳ್ಳಲು ಪ್ರಸ್ತಾವನೆ ಮಂಡನೆಯಾಗಿತ್ತು. ಈಗಾಗಲೆ ಕೆಲವು ಕಡೆ ಟೆಲಿಮೆಡಿಸಿನ್ ಸೇವೆ ಪ್ರಾಯೋಗಿಕವಾಗಿ ಜಾರಿಯಲ್ಲಿದ್ದು, ಪೂರ್ಣ ಪ್ರಮಾಣದಲ್ಲಿ ಅಪ್‌ಡೇಟೆಡ್ ರೂಪದಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ಹಾಗೆಯೇ ಕಲ್ಯಾಣ ಕರ್ನಾಟಕ ಭಾಗದ ಆರೋಗ್ಯ ಕ್ಷೇತ್ರ ಎದುರಿಸುತ್ತಿರುವ ವೈದ್ಯರು ಮತ್ತು ಇತರ ಸಿಬ್ಬಂದಿ ಕೊರತೆ ನೀಗಿಸುವ ಉದ್ದೇಶದಿಂದ ವಿಶೇಷ ಕಾನೂನು ಪ್ರಸ್ತಾಪಿಸುತ್ತಿದೆ. ಕರ್ನಾಟಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನೇಮಕಾತಿ ವಿಶೇಷ ಕಾನೂನುಗಳು 2020 ಅನ್ನು ವಿಧಾನಸಭೆಯಲ್ಲಿ ಮಂಡಿಸಲು ಸಂಪುಟ ಸಭೆ ಒಪ್ಪಿಗೆ ನೀಡಿದೆ. ಈ ಅಧಿವೇಶನದಲ್ಲಿ ಮಂಡನೆಯಾಗಿ ತಡಮಾಡದೆ ನೇಮಕ ಮಾಡಿಕೊಳ್ಳಬೇಕೆಂದು ಸರ್ಕಾರ ಬಯಸಿದೆ.

ಕರ್ನಾಟಕ ಕಾರಾಗೃಹ ಅಭಿವೃದ್ಧಿ ಮಂಡಳಿ ಮೂಲಕ ಕೈದಿಗಳಿಗೆ ಕೈತುಂಬ ಕೆಲಸ ಕೊಡಲು ಸರ್ಕಾರ ಬಯಸಿದೆ. ಆಂಧ್ರ ಸೇರಿ ವಿವಿಧ ರಾಜ್ಯಗಳಲ್ಲಿ ಅನುಷ್ಠಾನದಲ್ಲಿರುವ ಕ್ರಮಗಳನ್ನು ಅಧ್ಯಯನ ಮಾಡಿ ಇಲ್ಲೂ ಕೈದಿಗಳಿಂದ ವಿವಿಧ ಉತ್ಪನ್ನ ತಯಾರಿಸಿ ಮಂಡಳಿ ಮೂಲಕ ಮಾರುಕಟ್ಟೆ ಮಾಡಲು ಬಯಸಲಾಗಿದೆ. ಇದರಿಂದ ಕೈದಿಗಳನ್ನು ತೊಡಗಿಸಿಕೊಳ್ಳುವುದು, ಬಂದ ಲಾಭವನ್ನು ಅವರಿಗೂ ನೀಡುವ ಮೂಲಕ ಅವರಲ್ಲಿ ಪರಿವರ್ತನೆ ತರಲು ಉದ್ದೇಶಿಸಲಾಗಿದೆ.

### ಶಾಲಾ ಪುಸ್ತಕ ಮುದ್ರಣಕ್ಕೆ ತಯಾರಿ

**2021-22ನೇ ಸಾಲಿನಲ್ಲಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ 1ರಿಂದ 10ನೇ ತರಗತಿ ಮಕ್ಕಳಿಗೆ ಉಚಿತ ಪಠ್ಯ ಪುಸ್ತಕ ವಿತರಣೆಗೆ ಸರ್ಕಾರ ಸಿದ್ಧತೆ ನಡೆಸಿದೆ. ಪುಸ್ತಕ ಮುದ್ರಿಸಿ ಸರಬರಾಜು ಮಾಡಲು 153.91 ಕೋಟಿ ರೂ. ಒದಗಿಸಲು ಸಂಪುಟ ತೀರ್ಮಾನಿಸಿದೆ.**

### ಸೊಸೈಟಿ ಸದಸ್ಯತ್ವಕ್ಕೆ ಕಡಿವಾಣ?

ಕರ್ನಾಟಕ ಸಹಕಾರಿ ಸೊಸೈಟಿಗಳ (ತಿದ್ದುಪಡಿ) ಮಸೂದೆ, 2021 ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ಮಸೂದೆಗೆ ಸಂಪುಟ ಅನುಮೋದನೆ ನೀಡಿದೆ. ಈ ಮೂಲಕ ಒಬ್ಬ ವ್ಯಕ್ತಿ ಒಂದು ಸೊಸೈಟಿಗೆ ಮಾತ್ರ ಸದಸ್ಯತ್ವ ಹೊಂದಿರಬೇಕು ಎಂಬ ಪ್ರಸ್ತಾವನೆ ಮಾಡಲಾಗುತ್ತಿದೆ. ಜತೆಗೆ ಪ್ಯಾಕ್ಸ್ ಗಳ ಕಾರ್ಯದರ್ಶಿಗಳ ವರ್ಗಾವಣೆ ಮಾಡಲು ಅವಕಾಶ ಮಾಡಿಕೊಳ್ಳಲಾಗುತ್ತಿದೆ ಎಂದು ಹೇಳಲಾಗಿದೆ. ಇದೇ ಅಧಿವೇಶನದಲ್ಲಿ ಈ ಎರಡು ವಿದೇಯಕ ಮಂಡನೆಯಾಗುತ್ತಿವೆ.



### ಕಾಯ್ದೆಗೆ ತಿದ್ದುಪಡಿ



ಕರೋನಾ ಕಾರಣಕ್ಕೆ ರಾಜ್ಯದ ಆರ್ಥಿಕತೆ ಸಂಕಷ್ಟಕ್ಕೆ ಸಿಲುಕಿದ್ದು, ಈ ದುಸ್ಥಿತಿಯಿಂದ ಹೊರಬರಲು ಕರ್ನಾಟಕ ವಿತ್ತೀಯ ಹೊಣೆಗಾರಿಕೆ ತಿದ್ದುಪಡಿ ಮಸೂದೆ -2021 ಅನ್ನು ಪ್ರಸಕ್ತ ಅಧಿವೇಶನದಲ್ಲಿ ಮಂಡಿಸಿ, ಅಂಗೀಕಾರ ಪಡೆಯಲು ಸರ್ಕಾರ ನಿರ್ಧರಿಸಿದೆ. ಈ ಸಂಬಂಧ ತಿದ್ದುಪಡಿ ಮಸೂದೆ ಮಂಡಿಸಲು ಸಂಪುಟ ಒಪ್ಪಿಗೆ ನೀಡಿದೆ. 2021-22ನೇ ಸಾಲಿನಲ್ಲಿ 15,134 ಕೋಟಿ ರೂ. ರಾಜಸ್ವ ಕೊರತೆಯಾಗುವ ಅಂದಾಜಿದ್ದು, ವಿತ್ತೀಯ ಕೊರತೆಯು 59,240 ಕೋಟಿ ರೂ. ಆಗಬಹುದು. ಇದು ರಾಜ್ಯದ ಆಂತರಿಕ ಉತ್ಪನ್ನದ ಶೇ.3.48 ರಷ್ಟಾಗಲಿದೆ. ಆರ್ಥಿಕ ವರ್ಷಾಂತ್ಯದ ವೇಳೆಗೆ ಒಟ್ಟಾರೆ ಹೊಣೆಗಾರಿಕೆಯು (ಸಾಲ) 4,57,899 ಕೋಟಿ ರೂ. ಆಗುವುದರಿಂದ ರಾಜ್ಯದ ಆಂತರಿಕ ಉತ್ಪನ್ನದ ಶೇ.26.9 ರಷ್ಟಾಗಲಿದೆ. ಇದು ವಿತ್ತೀಯ ಹೊಣೆಗಾರಿಕೆ ಅಧಿನಿಯಮದ ಉಲ್ಲಂಘನೆ. ಈ ಕಾರಣಕ್ಕೆ ತಿದ್ದುಪಡಿ ಮಸೂದೆ ತರಲಾಗುತ್ತಿದೆ. 2021-22ನೇ ಸಾಲಿಗೆ ಕೇಂದ್ರ ಸರ್ಕಾರವು ರಾಜ್ಯಗಳಿಗೆ ಜಿಎಸ್‌ಡಿಪಿಯ ಶೇ.4ರವರೆಗೆ ಸಾಲ ಪಡೆಯಲು ಅನುಮತಿಸಿದ್ದು, ಆ ಪ್ರಕಾರ ವಿತ್ತೀಯ ಹೊಣೆಗಾರಿಕೆ ಅಧಿನಿಯಮ 2002ಕ್ಕೆ ತಿದ್ದುಪಡಿ ಮಾಡಲಾಗುತ್ತದೆ ಎಂದು ಬಜೆಟ್‌ನಲ್ಲಿ ಪ್ರಸ್ತಾಪ ಮಾಡಲಾಗಿತ್ತು.

### ಸಂಪುಟ ಸಭೆ ಮುಖ್ಯಾಂಶ

1 ಅಕ್ರಮ ಗಣಿಗಾರಿಕೆ ಸಂಬಂಧ ಲೋಕಾಯುಕ್ತದಿಂದ ರಚನೆಗೊಂಡ ಎಸ್ಐಟಿ ಅವಧಿ ವಿಸ್ತರಣೆ.

2 ಲೋಕಾಯುಕ್ತರ 2017-18ನೇ ಸಾಲಿನ ವಾರ್ಷಿಕ ವರದಿಯನ್ನು ವಿಧಾನ ಮಂಡಲದಲ್ಲಿ ಮಂಡಿಸಲು ಒಪ್ಪಿಗೆ.

3 ಗುತ್ತಿಗೆ ಆಧಾರದಲ್ಲಿ ಲೋಕಾಯುಕ್ತಕ್ಕೆ 12 ಹಿರಿಯ ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ನೇಮಕ.

4 ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ತಿದ್ದುಪಡಿ ಮಸೂದೆ 2021.

5 ರಾಣೆಬೆನ್ನೂರು ತಾಲೂಕು ಮಟ್ಟದ ಆಸ್ಪತ್ರೆಯನ್ನು 50 ಹಾಸಿಗೆಯಿಂದ 100 ಹಾಸಿಗೆಗೆ ಮೇಲ್ದರ್ಜೆಗೇರಿಸಲು 10.84 ಕೋಟಿ ರೂ. ಪರಿಷ್ಕೃತ ಅಂದಾಜಿಗೆ ಒಪ್ಪಿಗೆ.

6 ರಾಜ್ಯ ಕೈಗಾರಿಕೆ ಭದ್ರತೆ ಪಡೆ ವೃಂದ ನೇಮಕ ನಿಯಮ 2021ಕ್ಕೆ ಒಪ್ಪಿಗೆ.

7 ಅಥಣಿ ತಾಲೂಕಿನ ಸತ್ತಿ ಮತ್ತು ಇತರ 8 ಗ್ರಾಮಗಳಿಗೆ ಬಹುಗ್ರಾಮ ಯೋಜನೆ ಅನುಷ್ಠಾನಕ್ಕೆ 45.39 ಕೋಟಿ ರೂ. ಬಳಕೆ.

8 ಬೆಳಗಾವಿ ಮತ್ತು ಮಂಗಳೂರಿನಲ್ಲಿ 31.66 ಕೋಟಿ ರೂ. ವೆಚ್ಚದಲ್ಲಿ ಕರ್ನಾಟಕ್ ಜರ್ಮನ್ ತಂತ್ರಜ್ಞಾನ ತರಬೇತಿ ಸಂಸ್ಥೆ ಕಟ್ಟಡ ನಿರ್ಮಾಣಕ್ಕೆ ಅನುಮೋದನೆ.

9 ಮಂಗಳೂರು ನಗರ ಕಾರ್ಪೊರೇಷನ್ ವ್ಯಾಪ್ತಿಯಲ್ಲಿ ಕದ್ರಿ ಮಾರುಕಟ್ಟೆ ಸಂಕೀರ್ಣ ನಿರ್ಮಾಣಕ್ಕೆ 12.30 ಕೋಟಿ ರೂ.

10 ಕರ್ನಾಟಕ ನಗರ ಮತ್ತು ಪಟ್ಟಣ ಯೋಜನೆ ಮೂರನೇ ತಿದ್ದುಪಡಿ ಮಸೂದೆಗೆ ಅನುಮೋದನೆ.